ಇ) ಲಿಂಗಸಗೂರು ತಾಲ್ಲೂಕಿನಲ್ಲಿ ಎಸ್.ಪಿ. ಇಂಡೇನ್ ಗ್ಯಾಸ್ ಮುದ್ಗಲ್ ಇವರು ಪಟ್ಟಣ ಪಂಚಾಯಿತಿ ಅನುದಾನದಿಂದ 198 ಮತ್ತು ವೆಂಕಟೇಶ್ವರ ಗ್ಯಾಸ್ ಏಜೆನ್ಸಿ ಲಿಂಗಸಗೂರು ಇವರು ಲಿಂಗಸಗೂರು ಪುರಸಭೆ ಅನುದಾನದಿಂದ 211 ಜನ ಬಿಪಿಎಲ್ ಅನಿಲ ರಹಿತ ಪಡಿತರ ಚೀಟಿದಾರರಿಗೆ ಗ್ಯಾಸ್ ಸಂಪರ್ಕವನ್ನು ನೀಡಿರುತ್ತಾರೆ. ಈ ರೀತಿ ತಾಲ್ಲೂಕಿನಲ್ಲಿ ಒಟ್ಟು 409 ಜನ ಪಡಿತರ ಚೀಟಿದಾರರು ಪ್ರಥಮ ಆದ್ಯತೆ ಮೇರೆಗೆ ಉಚಿತ ಅನಿಲ ಸಂಪರ್ಕವನ್ನು ಪಡೆದಿರುತ್ತಾರೆ. ಅನಿಲ ಸಂಪರ್ಕ ವಿತರಿಸಲು ಅರ್ಹ ಅನಿಲ ರಹಿತ ಬಿಪಿಎಲ್ ಫಲಾನುಭವಿಗಳ ಪಟ್ಟಿಯನ್ನು ಸಂಬಂಧಿಸಿದ ಅನಿಲ ವಿತರಕರಿಗೆ ಮತ್ತು ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗೆ ನೀಡಲಾಗಿದೆ.

## ವೈದ್ಯರ ಕೊರತೆ

**2729 (3645); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)**

ಅ) ರಾಯಚೂರು ಜಿಲ್ಲೆ ಲಿಂಗಸೂರು ತಾಲ್ಲೂಕಿನಲ್ಲಿ ವೈದ್ಯರ ಕೊರತೆಯಿಂದಾಗಿ ರೋಗಿಗಳಿಗೆ ಚಿಕಿತ್ಸೆ ದೊರಕದೆ ವಯೋವೃದ್ಧ ರೋಗಿಗಳನ್ನು ದೂರದ ಪ್ರದೇಶಗಳಿಗೆ ಕರೆದೊಯ್ಯುವ ಸ್ಥಿತಿಯು ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಪೌಷ್ಟಿಕತೆಯಿಂದ ನರಳುತ್ತಿರುವ ಮಕ್ಕಳಿಗೆ ಸಕಾಲದಲ್ಲಿ ಚಿಕಿತ್ಸೆ ನೀಡಲು ಮಕ್ಕಳ ತಜ್ಞ ವೈದ್ಯರಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ತಜ್ಞ ವೈದ್ಯರನ್ನು ಕೂಡಲೇ ನೇಮಿಸಲು ಸರ್ಕಾರ ಕ್ರಮಕೈಗೊಳ್ಳುವುದೇ?

**ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)**

ಅ) ರಾಯಚೂರು ಜಿಲ್ಲೆಯ ಲಿಂಗಸೂರು ತಾಲ್ಲೂಕಿನಲ್ಲಿರುವ 13 ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 13 ಸಾಮಾನ್ಯ ಕರ್ತವ್ಯ

ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 5 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಗ್ರಾಮೀಣ ಪ್ರದೇಶದ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆಯಾಯಾ ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ.

ಲಿಂಗಸುಗೂರು ಸಾರ್ವಜನಿಕ ಆಸ್ಪತ್ರೆಯಲ್ಲಿ 10 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 8 ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 2 ತಜ್ಞ ವೈದ್ಯರ ಹುದ್ದೆಗಳು ಖಾಲಿ ಇವೆ (ಮಕ್ಕಳ ತಜ್ಞರು ಮತ್ತು ಮುಖ್ಯ ವೈದ್ಯಾಧಿಕಾರಿ).

ಆ) ಬಂದಿದೆ.

ಇ) ಎನ್‌ಹೆಚ್‌ಎಂ ಯೋಜನೆಯಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ನೇಮಕಗೊಳ್ಳುವ ಈ ಜಿಲ್ಲೆಯ ಮಕ್ಕಳ ತಜ್ಞರಿಗೆ ಮಾಸಿಕ ಸಂಭಾವನೆ ₹ 1.00 ಲಕ್ಷಕ್ಕೆ ಹೆಚ್ಚಿಸಲಾಗಿದೆ ಹಾಗೂ ಅರ್ಹರಿಂದ ಈ ಹುದ್ದೆಯನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ ಹಾಗೂ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಭರ್ತಿ ಮಾಡಲು ಕ್ರಮ ವಹಿಸಲಾಗುತ್ತಿದೆ.

**ಉದ್ಯೋಗಿಗಳನ್ನು ಕೆಲಸದಿಂದ ತೆಗೆದು ಹಾಕಿರುವುದು**

**2731 (3242); ಶ್ರೀ ಮಂಜುನಾಥ ಗೌಡ .ಕೆ.ಎಸ್ (ಮಾಲೂರು)**

ಅ) ರಾಜ್ಯದಲ್ಲಿ ಖಾಸಗಿ ಮಾಹಿತಿ ತಂತ್ರಜ್ಞಾನ ವಹಿವಾಟಿನ ಕೆಲ ಕಂಪನಿಗಳು ತನ್ನ ಉದ್ಯೋಗಿಗಳಿಗೆ ಸರಿಯಾದ ಕಾರಣ ನೀಡದೇ ತೆಗೆದು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;